ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೧೦, ಜೂನ್, ೨೦೨೨ (ಜ್ಯೇಷ್ಠ, ೨೦, ಶಕವರ್ಷ, ೧೯೪೪)<br>BENGALURU, FRIDAY, 10, JUNE, 2022 ( JYEISHTA, 20, SHAKAVARSHA, 1944) | ನಂ. ೩೩೦<br>No. 330 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

## ಸಂಖ್ಯೆ: ಸಂವ್ಯಶಾಇ 16 ಶಾಸನ 2022, ಬೆಂಗಳೂರು, ದಿನಾಂಕ:10.06.2022.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ಅಧ್ಯಾದೇಶ, 2022 ಇದಕ್ಕೆ 2022ರ ಜೂನ್ ತಿಂಗಳ 09ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2022ರ ಕರ್ನಾಟಕ ಅಧ್ಯಾದೇಶ ಸಂಖ್ಯೆ:05 ಎಂಬುದಾಗಿ ದಿನಾಂಕ 10ನೇ ಜೂನ್, 2022ರಂದು ಕರ್ನಾಟಕ ರಾಜ್ಯಪತ್ರದ ವಿಶೇಷ ರಾಜ್ಯ ಪತ್ರಿಕೆಯಲ್ಲಿ (ಭಾಗ-IVA) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

### 2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 05

### ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ಅಧ್ಯಾದೇಶ, 2022

(ಭಾರತ ಗಣರಾಜ್ಯದ ಎಪ್ಪತ್ತಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರಿಂದ ಪ್ರಖ್ಯಾಪಿತವಾಗಿ 2022 ರ ಜೂನ್ ತಿಂಗಳ 10ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ).

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ: 53) ಕ್ಕೆ ತಿದ್ದುಪಡಿ ಮಾಡಲು ಒಂದು ಅಧ್ಯಾದೇಶ.

ಕರ್ನಾಟಕ ವಿಧಾನಸಭೆ ಮತ್ತು ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನದಲ್ಲಿ ಇಲ್ಲದಿರುವುದರಿಂದ ಮತ್ತು ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಅಧ್ಯಾದೇಶವನ್ನು ಪ್ರಖ್ಯಾಪಿಸಲು ಶೀಘ್ರ ಕ್ರಮವನ್ನು ತೆಗೆದುಕೊಳ್ಳುವುದು ಅವಶ್ಯಗೊಳಿಸುವಂಥ ವಿದ್ಯಮಾನಗಳು ಉಂಟಾಗಿವೆಯೆಂದು ಕರ್ನಾಟಕದ ರಾಜ್ಯಪಾಲರಿಗೆ ಮನದಟ್ಟಾಗಿರುವುದರಿಂದ;

ಆದ್ದರಿಂದ, ಈಗ ಭಾರತ ಸಂವಿಧಾನದ 213ನೇ ಅನುಚ್ಛೇಧದ (1)ನೇ ಖಂಡದಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕದ ರಾಜ್ಯಪಾಲರು ಈ ಮುಂದಿನ ಅಧ್ಯಾದೇಶವನ್ನು ಪ್ರಖ್ಯಾಪಿಸಿರುತ್ತಾರೆ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧ್ಯಾದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ಅಧ್ಯಾದೇಶ, 2022 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 7ನೇ ಪ್ರಕರಣದ ತಿದ್ದುಪಡಿ.-** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020ರ (2020ರ ಕರ್ನಾಟಕ ಅಧಿನಿಯಮ: 53) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 7ನೇ ಪ್ರಕರಣದಲ್ಲಿ,-

(i) (3)ನೇ ಉಪಪ್ರಕರಣದಲ್ಲಿ,-

(ಎ). (ಸಿ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಡಿ) ಪಾಲಿಕೆಯಲ್ಲಿ ನೇರ ಚುನಾವಣೆಯ ಮೂಲಕ ತುಂಬಬೇಕಾದ ಒಟ್ಟು ಸ್ಥಾನಗಳ ಸಂಖ್ಯೆಯ ಮೂರನೇ ಒಂದರಷ್ಟರ ಅಂಥ ಸಂಖ್ಯೆಯ ಸ್ಥಾನಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಹಿಂದುಳಿದ ವರ್ಗಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಿರಿಸಲಾಗಿದೆ ಎಂಬುದನ್ನು,"

(ಬಿ). ಪರಂತುಕದಲ್ಲಿ "(2)ನೇ ಉಪ-ಪ್ರಕರಣದ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗಾಗಿ ಮತ್ತು ಈ ಉಪ-ಪ್ರಕರಣದಡಿಯಲ್ಲಿ ಹಿಂದುಳಿದ ವರ್ಗದವರಿಗಾಗಿ ಮೀಸಲಿರಿಸಿದ ಒಟ್ಟು ಸ್ಥಾನಗಳ ಸಂಖ್ಯೆಯು ಪಾಲಿಕೆಯಲ್ಲಿನ ಒಟ್ಟು ಸ್ಥಾನಗಳ ಸಂಖ್ಯೆಯ ಮೂರನೇ ಒಂದರಷ್ಟನ್ನು ಮೀರದಂತೆ ನಿರ್ಧರಿಸತಕ್ಕದ್ದು." ಎಂಬ ಪದಗಳು, ಅಂಕಿ ಮತ್ತು ಆವರಣ ಚಿಹ್ನೆಗಳ ಬದಲಿಗೆ "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗಾಗಿ ಮತ್ತು ಹಿಂದುಳಿದ ವರ್ಗದವರಿಗಾಗಿ ಮೀಸಲಿರಿಸಿದ ಒಟ್ಟು ಸ್ಥಾನಗಳ ಸಂಖ್ಯೆಯು ಪಾಲಿಕೆಯಲ್ಲಿನ ಒಟ್ಟು ಸ್ಥಾನಗಳ ಸಂಖ್ಯೆಯ ಶೇಕಡ ಐವತ್ತನ್ನು ಮೀರದಂತೆ ನಿರ್ಧರಿಸತಕ್ಕದ್ದು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**3. 8ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 8ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿನ ಒಂದನೇ ಪರಂತುಕದಲ್ಲಿ, "(3)ನೇ ಉಪಪ್ರಕರಣದ ಅಡಿಯಲ್ಲಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಮೀಸಲಿರಿಸಿದಂತೆ ಇರತಕ್ಕದ್ದು ಹಾಗೂ ಈ ಉಪ ಪ್ರಕರಣದ ಅಡಿಯಲ್ಲಿ ಹಿಂದುಳಿದ ವರ್ಗಗಳು ಪಾಲಿಕೆಯ ಸೀಟುಗಳ ಒಟ್ಟು ಸಂಖ್ಯೆಯ ಮೂರನೇ ಒಂದರಷ್ಟನ್ನು ಮೀರತಕ್ಕದ್ದಲ್ಲ." ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳ ಬದಲಿಗೆ "(2) ಮತ್ತು (3)ನೇ ಉಪಪ್ರಕರಣಗಳ ಅಡಿಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಹಾಗೂ ಹಿಂದುಳಿದ ವರ್ಗಗಳಿಗೆ ಮೀಸಲಿರಿಸಿದ ಪಾಲಿಕೆಯಲ್ಲಿನ ಒಟ್ಟು ಸ್ಥಾನಗಳ ಸಂಖ್ಯೆಯು ಶೇಕಡಾ ಐವತ್ತರಷ್ಟನ್ನು ಮೀರತಕ್ಕದ್ದಲ್ಲ." ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳನ್ನು ಪ್ರತಿಯೋಜಿಸತಕ್ಕದ್ದು.

**ಥಾವರ್‌ಚಂದ್ ಗೆಹ್ಲೋಟ್**
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

**PARLIAMENTARY AFFAIRS AND LEGISLATION SECRETARIAT**
**NOTIFICATION**
**NO: DPAL 16 SHASANA 2022, BENGALURU, DATED:10.06.2022**

Ordered that the translation of ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ಅಧ್ಯಾದೇಶ, 2022 (2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ:05) in English language, be published under clause (3) of Article 348 of the Constitution of India in the Karnataka Gazette for general information.

The following translation of ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ಅಧ್ಯಾದೇಶ, 2022 (2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ:05) in English language is published in the Official Gazette under clause (3) of Article 348 of the Constitution of India.

## KARNATAKA ORDINANCE NO. 05 OF 2022
## THE BRUHAT BENGALURU MAHANAGARA PALIKE (AMENDMENT) ORDINANCE, 2022

(Promulgated by the Governor of Karnataka in the Seventy third year of the Republic of India and first published in the Karnataka Gazette Extra-ordinary on the 10th day of June, 2022)

An Ordinance to amend the Bruhat Bengaluru Mahanagara Palike Act, 2020 (Karnataka Act 53 of 2020);

Whereas the Karnataka Legislative Assembly and the Karnataka Legislative Council are not in session and the Governor of Karnataka is satisfied that the circumstances exist which render it necessary for him to take immediate action to promulgate the Ordinance for the purposes hereinafter appearing;

Now, therefore, in exercise of the powers conferred by clause (1) of Article 213 of the Constitution of India, the Governor of Karnataka is pleased to promulgate the following Ordinance, namely:-

**1. Short title and commencement.-** (1) This Ordinance may be called the Bruhat Bengaluru Mahanagara Palike (Amendment) Ordinance, 2022.

(2) It shall come into force at once.

**2. Amendment of section 7.-** In the Bruhat Bengaluru Mahanagara Palike Act, 2020 (Karnataka Act 53 of 2020) (hereinafter referred to as the Principal Act) in section 7,-

(i) in sub section (3),-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



(a) after clause (c), the following shall be inserted, namely:-

"(d) Such number of seats which shall as nearly as may be, one third of the total number of seats to be filled by direct election in the corporation shall be reserved for persons belonging to the Backward Classes."

(b) in the proviso, for the words, figure and brackets "under sub-section (2) and the Backward Classes under this sub-section shall not exceed one third of the total number of seats in the Corporation", the words "and the Backward Classes under this sub-section shall not exceed fifty percent of the total number of seats in the Corporation" shall be substituted.

**3. Amendment of section 8.-** In the Principal Act, in section 8, in sub-section (3), in the first proviso, for the words, figure and brackets "under sub-section (3) and the Backward Classes under this sub-section shall not exceed one third of the total number of seats in the Corporation", the words, figures and brackets "and the Backward Classes under sub-sections (2) and (3) shall not exceed fifty percent of the total number of seats in the Corporation" shall be substituted.

The above translation of ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ಅಧ್ಯಾದೇಶ, 2022 (2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ:05) be published in the official Gazette under clause (3) of Article 348 of the Constitution of India.

**THAAWARCHAND GEHLOT**
**GOVERNOR OF KARANATAKA**

By order and in the name of the
Governor of Karnataka,

**G. SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE